# All India Radio: Bangalore
# Regional Bulletin In Kannada
# 26.04.2026 / 6.40 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 26.04.2026 / 6.40 p.m.

****************

ಮುಖ್ಯಾಂಶಗಳು

1. ರಾಜ್ಯದ ಕರ್ಮ ವಿಹಾರದಲ್ಲಿ 700ಕ್ಕೂ ಹೆಚ್ಚು ಸ್ಥಳೀಯ ಮರಗಳ ಸಂರಕ್ಷಣೆ – ಮನ್ ಕಿ ಬಾತ್ ನಲ್ಲಿ ಪ್ರಧಾನಿ ನರೇಂದ್ರ ಮೋದಿ ಶ್ಲಾಘನೆ
2. ಜನಗಣತಿ–2027ರಲ್ಲಿ ಪ್ರತಿಯೊಬ್ಬರೂ ಭಾಗವಹಿಸುವಂತೆ ನಾಗರಿಕರಿಗೆ ಪ್ರಧಾನಿ ಕರೆ
3. ನವ ಮತ್ತು ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಯುವಕರಿಗೆ ವಿಫುಲ ಉದ್ಯೋಗವಕಾಶ – ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ
4. ಗದಗದ ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಯಶಸ್ವಿ **Transcatheter Aortic Valve Implantation** ಹೃದಯ ಶಸ್ತ್ರಚಿಕಿತ್ಸೆ

****************

ಬೌದ್ಧ ಸಂಪ್ರದಾಯವು ಪ್ರಕೃತಿಯೊಂದಿಗೆ ಸಂಪರ್ಕ ಹೊಂದುವುದನ್ನು ಕಲಿಸುತ್ತದೆ. ಕರ್ನಾಟಕ ಸೇರಿದಂತೆ ದೇಶಾದ್ಯಂತ ಇಂತಹ ಪ್ರಯತ್ನಗಳು ನಡೆಯುತ್ತಲೇ ಇವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ ಮನ್ ಕಿ ಬಾತ್‌ನ 133ನೇ ಆವೃತ್ತಿಯಲ್ಲಿಂದು ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತು ಹಂಚಿಕೊಂಡಿರುವ ಅವರು, ಕರ್ನಾಟಕದಲ್ಲಿರುವ ಕರ್ಮ ವಿಹಾರವು ಒಂದು ಉತ್ತಮ ಉದಾಹರಣೆಯಾಗಿದೆ. ಈ ವಿಹಾರವು 100 ಎಕರೆಗಳಷ್ಟು ವಿಸ್ತಾರವಾದ ಅರಣ್ಯವಾಗಿದೆ. ಈ ಅರಣ್ಯದಲ್ಲಿ 700ಕ್ಕೂ ಹೆಚ್ಚು ಸ್ಥಳೀಯ ಮರಗಳನ್ನು ಸಂರಕ್ಷಿಸಲಾಗಿದೆ ಎಂದರು.

ಬುದ್ಧನ ಸಂದೇಶವು ಕೇವಲ ಭೂತಕಾಲಕ್ಕೆ ಸೀಮಿತವಾಗಿಲ್ಲ. ಅದು ಇಂದಿಗೂ ಪ್ರಸ್ತುತ ಮತ್ತು ಭವಿಷ್ಯಕ್ಕೆ ಕೂಡ ಅವಶ್ಯಕವಾಗಿದೆ. ಬುದ್ಧ ಪೂರ್ಣಿಮೆಯ ಈ ಸಂದರ್ಭವು ಸ್ಫೂರ್ತಿದಾಯಕವಾಗಿದೆ ಎಂದು ಹೇಳಿದರು.

ಈ ಕುರಿತು ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲೂಕಿನ ಕರ್ಮ ವಿಹಾರ ಮತ್ತು ಬೋಧಿಸತ್ವ ಟ್ರಸ್ಟ್‌ನ ಸಂಸ್ಥಾಪಕ ಹಾಗೂ ಅಧ್ಯಕ್ಷರಾದ ಕರ್ಮ ರಿನ್. ಪೋಚೆ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

****ಧ್ವನಿ*** ಕರ್ಮ ರಿನ್. ಪೋಚೆ

ಮಳೆಗಾಲ ಮುಗಿದ ತಕ್ಷಣ, 'ರನ್ ಆಫ್ ಕಚ್' ನ ಭೂಮಿ ಜೀವ ತಳೆಯುತ್ತದೆ. ಪ್ರತಿ ವರ್ಷ, ಲಕ್ಷಾಂತರ ಫ್ಲೆಮಿಂಗೊ ಪಕ್ಷಿಗಳು ಇಲ್ಲಿಗೆ ಭೇಟಿ ನೀಡುತ್ತವೆ. ಇಡೀ ಪ್ರದೇಶವು ಗುಲಾಬಿ ಬಣ್ಣಕ್ಕೆ ಬದಲಾಗುತ್ತದೆ. ಆದ್ದರಿಂದ ಇದನ್ನು 'ಫ್ಲೆಮಿಂಗೊ ನಗರ' ಎಂದು ಕರೆಯಲಾಗುತ್ತದೆ ಎಂದು ಪ್ರಧಾನಿ ಹೇಳಿದರು.

ಈ ಪಕ್ಷಿಗಳು ಇಲ್ಲಿಯೇ ತಮ್ಮ ಗೂಡುಗಳನ್ನು ಕಟ್ಟುತ್ತವೆ ಮತ್ತು ತಮ್ಮ ಮರಿಗಳನ್ನು ಬೆಳೆಸುತ್ತವೆ. ಕಚ್‌ನ ಜನರು ಅವುಗಳನ್ನು 'ಲಾಖಾ ಅವರ ಅತಿಥಿಗಳು' ಎಂದು ಕರೆಯುತ್ತಾರೆ. ಈಗ, ಲಾಖಾ ಅವರ ಈ ಅತಿಥಿಗಳು ಕಚ್‌ನಲ್ಲಿ ಪರಿಸರ ಸಂರಕ್ಷಣೆಯ ಸುಂದರ ಸಂಕೇತವಾಗಿವೆ ಎಂದರು.

ಉತ್ತರ ಪ್ರದೇಶದ ತರಾಯಿ ಪ್ರದೇಶದಲ್ಲಿ, ಸುಗ್ಗಿಯ ಸಮಯದಲ್ಲಿ ಆನೆಗಳ ಹಿಂಡುಗಳು ಗ್ರಾಮಗಳತ್ತ ಸಾಗಿ ಬರುತ್ತವೆ. ಇದು ಸಂಘರ್ಷದ ಅಪಾಯವನ್ನು ಹೆಚ್ಚಿಸುತ್ತದೆ. ಆದಾಗ್ಯೂ, ಈಗ ಉತ್ತರ ಪ್ರದೇಶದಲ್ಲಿ 'ಗಜ ಮಿತ್ರ' ದಂತಹ ಉಪಕ್ರಮಗಳು ಪ್ರಾರಂಭವಾಗಿವೆ. ಆನೆಗಳನ್ನು ಕಾಯಲು ಗ್ರಾಮಸ್ಥರು ತಂಡಗಳನ್ನು ರಚಿಸಿದ್ದಾರೆ. ಅವರು ಸಮಯಕ್ಕೆ ಸರಿಯಾಗಿ ಗ್ರಾಮಸ್ಥರನ್ನು ಎಚ್ಚರಿಸುತ್ತಾರೆ. ಇದು ಸಂಘರ್ಷವನ್ನು ಕಡಿಮೆ ಮಾಡುತ್ತಿದೆ ಮತ್ತು ಸಾರ್ವಜನಿಕ ನಂಬಿಕೆಯನ್ನು ಹೆಚ್ಚಿಸುತ್ತಿದೆ ಎಂದು ಪ್ರಧಾನಿ ತಿಳಿಸಿದರು.

ನಾಗಾಲ್ಯಾಂಡ್‌ನ ದೀಮಾಪುರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅನೇಕ ಸ್ವ-ಸಹಾಯ ಗುಂಪುಗಳು, ಬಿದಿರು ಸಂಬಂಧಿತ ಆಹಾರ ಉತ್ಪನ್ನಗಳಲ್ಲಿ ಮೌಲ್ಯ ವರ್ಧನೆ ಮಾಡಿವೆ. ಅಲ್ಲಿ ಬಿದಿರಿನ ಪೀಠೋಪಕರಣಗಳು ಮತ್ತು ಕರಕುಶಲ ವಸ್ತುಗಳನ್ನು ತಯಾರಿಸುತ್ತಿರುವ ಖೋರೋಲೋ ಕ್ರಿಯೇಟಿವ್ ಕ್ರಾಫ್ಟ್ಸ್ ನಂತರ ತಂಡಗಳು ಕೂಡ ಇವೆ ಎಂದು ಅವರು ಮಾಹಿತಿ ನೀಡಿದರು.

ಮಿಜೋರಾಂನ ಮಾಮಿತ್ ಜಿಲ್ಲೆಯಲ್ಲಿ ಇಂತಹದ್ದೆ ಒಂದು ತಂಡವಿದ್ದು, ಇವು ಬಿದಿರಿನ tissue culture ಮತ್ತು poly-house management ಬಗ್ಗೆ ಕೆಲಸ ಮಾಡುತ್ತಿದೆ. ಗ್ಯಾಂಗ್ಟೋಕ್ ಸಮೀಪದಲ್ಲಿ Lagastal Bamboo Enterprise, ಬಿದಿರಿನಿಂದ ಕರಕುಶಲ ವಸ್ತುಗಳು, ಅಗರಬತ್ತಿ, ಪೀಠೋಪಕರಣಗಳು ಮತ್ತು ಒಳಾಂಗಣ ಸೌಂದರ್ಯ ವಸ್ತುಗಳನ್ನು ತಯಾರಿಸುತ್ತದೆ ಎಂದು ವಿವರಿಸಿದರು.

ದೇಶದಲ್ಲಿ ಈಗ ಜನಗಣತಿ ಅಭಿಯಾನ ನಡೆಯುತ್ತಿದೆ. ಇದು ವಿಶ್ವದ ಅತಿದೊಡ್ಡ ಜನಗಣತಿಯಾಗಿದೆ. ಈಗಾಗಲೇ ಇತರ ಜನಗಣತಿಯಲ್ಲಿ ಪಾಲ್ಗೊಂಡಿರುವವರಿಗೂ, ಈ ಬಾರಿಯ ಜನಗಣತಿ ಅವರ ಮೊದಲಿನ ಅನುಭವಕ್ಕಿಂತ ಭಿನ್ನವಾಗಿರಲಿದೆ. ಜನಗಣತಿ 2027 ಅನ್ನು ಡಿಜಿಟಲ್ ಮಾಡಲಾಗಿದೆ. ಎಲ್ಲಾ ಮಾಹಿತಿಯನ್ನು ನೇರವಾಗಿ ಡಿಜಿಟಲ್ ಮಾಧ್ಯಮ ಮೂಲಕ ದಾಖಲಿಸಲಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಮನೆ ಮನೆಗೆ ತೆರಳುವ ಸಿಬ್ಬಂದಿ ಬಳಿ ಮೊಬೈಲ್ ಆ್ಯಪ್ ಇರುತ್ತದೆ. ಅವರು ಮಾಹಿತಿಯನ್ನು ಅದರಲ್ಲೇ ದಾಖಲಿಸುತ್ತಾರೆ. ಈ ಬಾರಿ ಜನಗಣತಿಯಲ್ಲಿ ಜನರ ಪಾಲ್ಗೊಳ್ಳುವಿಕೆಯನ್ನು ಮತ್ತಷ್ಟು ಸರಳೀಕೃತಗೊಳಿಸಲಾಗಿದೆ. ನೀವು ಸ್ವತಃ ನಿಮ್ಮ ಕುರಿತ ಮಾಹಿತಿಯನ್ನು ದಾಖಲಿಸಬಹುದಾಗಿದೆ. ಸಿಬ್ಬಂದಿ ಆಗಮಿಸುವುದಕ್ಕೆ 15 ದಿನಗಳಿಗೆ ಮುನ್ನವೇ ಸೌಲಭ್ಯ ಆರಂಭವಾಗುತ್ತದೆ ಎಂದು ತಿಳಿಸಿದರು.

ಪ್ರಕ್ರಿಯೆ ಪೂರ್ಣಗೊಳಿಸಿದಾಗ, ಒಂದು ವಿಶೇಷ ಐಡಿ ದೊರೆಯುತ್ತದೆ. ಈ ಐಡಿ ನಿಮ್ಮ ಮೊಬೈಲ್ ಅಥವಾ ಇ-ಮೇಲ್ ನಲ್ಲಿ ಬರುತ್ತದೆ. ನಂತರ ಸಿಬ್ಬಂದಿ ಮನೆಗೆ ಬಂದಾಗ, ಈ ಐಡಿ ತೋರಿಸಿ, ಮಾಹಿತಿ ದೃಢೀಕರಿಸಬಹುದು. ಇದರಲ್ಲಿ ಪುನಃ ಮಾಹಿತಿ ನೀಡುವ ಅಗತ್ಯ ಇರುವುದಿಲ್ಲ. ಸ್ವಯಂ ಎಣಿಕೆ ಕಾರ್ಯ ಪೂರ್ಣಗೊಂಡ ರಾಜ್ಯಗಳಲ್ಲಿ, ಜನಗಣತಿ ಸಿಬ್ಬಂದಿ ಮನೆಗಳ ಪಟ್ಟಿ ಮಾಡುವ ಕೆಲಸ ಸಹ ಪ್ರಾರಂಭಿಸಿದ್ದಾರೆ ಎಂದು ಅವರು ವಿವರಿಸಿದರು.

ಇಲ್ಲಿಯವರೆಗೆ, ಸುಮಾರು 1 ಕೋಟಿ 20 ಲಕ್ಷ ಕುಟುಂಬಗಳ ಮನೆಗಳ ಪಟ್ಟಿ ಮಾಡುವ ಕೆಲಸ ಪೂರ್ಣಗೊಂಡಿದೆ. ಮಾಹಿತಿಯು ಸಂಪೂರ್ಣವಾಗಿ ಸುರಕ್ಷಿತವಾಗಿರುತ್ತದೆ, ಅದನ್ನು ಗೌಪ್ಯವಾಗಿ ಇರಿಸಲಾಗುತ್ತದೆ. ಅದನ್ನು ಡಿಜಿಟಲ್ ಭದ್ರತೆಯಿಂದ ರಕ್ಷಿಸಲಾಗುತ್ತದೆ. ಹೀಗಾಗಿ ಪ್ರತಿಯೊಬ್ಬರೂ ಜನಗಣತಿ 2027ರಲ್ಲಿ ಭಾಗವಹಿಸುವಂತೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದರು.

****************

ದೂರದೃಷ್ಟಿ ನಾಯಕತ್ವದಿಂದ ದೇಶದ ಇಂಧನ ವ್ಯವಸ್ಥೆಗೆ ಭದ್ರ ಬುನಾದಿ ಹಾಕಿಕೊಟ್ಟ ಪ್ರಧಾನಿ ನರೇಂದ್ರ ಮೋದಿ ಅವರು, 'ಮನ್ ಕೀ ಬಾತ್' ಮೂಲಕ ಭಾರತದ ಸೌರಶಕ್ತಿ, ಪವನ ಶಕ್ತಿ ಮೇಲೆ ಪ್ರಖರ ಬೆಳಕು ಚೆಲ್ಲಿದ್ದಾರೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ.

ಹುಬ್ಬಳ್ಳಿಯ 52ನೇ ವಾರ್ಡ್‌ನಲ್ಲಿ ಸಾರ್ವಜನಿಕರೊಂದಿಗೆ 'ಮನ್ ಕೀ ಬಾತ್'ನ 133ನೇ ಆವೃತ್ತಿ ವೀಕ್ಷಿಸಿ ಮಾತನಾಡಿದ ಅವರು, ಭಾರತದ ಪವನ ಶಕ್ತಿ ಸಾಮರ್ಥ್ಯ ಇದೀಗ 56 ಗಿಗಾ ವ್ಯಾಟ್ಸ್‌ಗೆ ಏರಿಕೆಯಾಗಿದೆ. ದೇಶದಲ್ಲಿ ಇಂಧನ ಸುಸ್ಥಿರತೆ, ಶುದ್ಧ ಇಂಧನ, ಪರಿಸರ ಸಂರಕ್ಷಣೆ ಮತ್ತು ರಾಷ್ಟ್ರದ ಉತ್ತಮ ಭವಿಷ್ಯಕ್ಕಾಗಿ ಸೌರ ಮತ್ತು ಪವನ ಶಕ್ತಿ ಅಳವಡಿಕೆ ಅತ್ಯಗತ್ಯವಾಗಿದೆ ಎನ್ನುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರು, ವಿಕಸಿತ ಭಾರತಕ್ಕಾಗಿ ಶುದ್ಧ ಇಂಧನ ಸಾಮರ್ಥ್ಯದ ಸಾಮೂಹಿಕ ಪ್ರಯತ್ನಕ್ಕೆ ಕರೆ ನೀಡಿದ್ದಾರೆ ಎಂದರು.

ನವ ಮತ್ತು ನವೀಕರಿಸಬಹುದಾದ ಇಂಧನ ಉತ್ಪಾದನೆ, ಯುವಕರಿಗೆ ಹೊಸ ಅವಕಾಶಗಳು ಮತ್ತು ಉದ್ಯೋಗಗಳನ್ನು ಸೃಷ್ಟಿಸುತ್ತಿವೆ. ಭಾರತದ ವಿಕಾಸದಲ್ಲಿ ಪವನ ಶಕ್ತಿ ಹೊಸ ಭಾಷ್ಯ ಬರೆದಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಹೇಳಿದರು.

****************

ಗದಗ ನಗರದ ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ **Transcatheter Aortic Valve Implantation** ಹೃದಯ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿ ನೆರವೇರಿಸಲಾಗಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ತಿಳಿಸಿದ್ದಾರೆ.

ಗದಗ ನಗರದಲ್ಲಿಂದು ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಮೊಟ್ಟ ಮೊದಲ ಬಾರಿಗೆ **Transcatheter Aortic Valve Implantation** ಹೃದಯ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿ ನಡೆಸಲಾಗಿದೆ. ಈ ಮೂಲಕ ಜಯದೇವ ಆಸ್ಪತ್ರೆ ಹೊರತುಪಡಿಸಿ, ಈ ಶಸ್ತ್ರಚಿಕಿತ್ಸೆ ನಡೆಸಿದ ರಾಜ್ಯದ ಮೊದಲ ಜಿಲ್ಲೆ ಎಂಬ ಹೆಗ್ಗಳಿಕೆಗೆ ಗದಗ ಪಾತ್ರವಾಗಿದೆ ಎಂದರು.

ಖಾಸಗಿ ಆಸ್ಪತ್ರೆಗಳಲ್ಲಿ 22 ರಿಂದ 25 ಲಕ್ಷ ರೂಪಾಯಿ ವೆಚ್ಚವಾಗಬಹುದಾದ ಈ ಹೃದಯ ಶಸ್ತ್ರಚಿಕಿತ್ಸೆಯನ್ನು ಅರ್ಹ ರೋಗಿಗಳಿಗೆ ಉಚಿತವಾಗಿ ನಡೆಸಲಾಗುತ್ತದೆ ಎಂದು ಸಚಿವ ಎಚ್.ಕೆ. ಪಾಟೀಲ ಮಾಹಿತಿ ನೀಡಿದರು.

****************

ಗರ್ಭಿಣಿಯ ಜೀವಕ್ಕೆ ಅಪಾಯ ಉಂಟಾದ ಸಂದರ್ಭಗಳಲ್ಲಿ ಗರ್ಭಧಾರಣೆಯ ಅವಧಿ ಎಷ್ಟೇ ಆಗಿದ್ದರೂ ವೈದ್ಯಕೀಯ ಮಂಡಳಿಯ ಶಿಫಾರಸ್ಸಿನ ಮೇರೆಗೆ ಗರ್ಭಪಾತ ಮಾಡಬಹುದು. ಇದಕ್ಕಾಗಿ ನ್ಯಾಯಾಲಯದ ಆದೇಶ ಕಡ್ಡಾಯವಲ್ಲ ಎಂದು ಯಾದಗಿರಿ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶ ಮರುಳಸಿದ್ದಾರಾಧ್ಯ ಎಚ್.ಜಿ. ತಿಳಿಸಿದ್ದಾರೆ.

ಯಾದಗಿರಿ ನಗರದ ಜಿಲ್ಲಾ ಪೊಲೀಸ್ ಕಾರ್ಯಾಲಯದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೊಲೀಸ್ ಹಾಗೂ ಸಾಥಿ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ನಡೆದ ಮಕ್ಕಳ ನ್ಯಾಯ ಕಾಯ್ದೆ, ಪೋಕ್ಸೊ, ಗರ್ಭಪಾತ ಮತ್ತು ಡಬ್ಲ್ಯುಸಿಪಿಸಿ ಕುರಿತ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

****************